# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.27 ಬಾಣಸವಾಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ಕಛೇರಿಯ ಸಭಾಂಗಣದಲ್ಲಿ ದಿನಾಂಕ: 20-08-2022 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ವಿನೋದ್.ಕೆ.ಎಂ, ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಶ್ರೀಕಾಂತ್.ಕೆ, ಸದಸ್ಯ ಕಾರ್ಯದರ್ಶಿ ಮತ್ತು ಸಂಚಾಲಕರು,
3. ಶ್ರೀ ಸಂದೀಪ್.ಎಸ್, ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ.27
4. ಶ್ರೀ ಶ್ರೀಧರ್, ಸ್ಥಳೀಯರು, ಬಾಣಸವಾಡಿ,
5. ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ,
6. ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು, ಬಾಣಸವಾಡಿ,
7. ಶ್ರೀ ಅರುಳ್, ಸ್ಥಳೀಯರು, ಬಾಣಸವಾಡಿ,
8. ಶ್ರೀ ಉಪೇಂದ್ರ, ಸ್ಥಳೀಯರು, ಬಾಣಸವಾಡಿ,
9. ಶ್ರೀ.ಕ್ರಿಸ್ಟೋಫರ್ ಕ್ರೂಸ್ ಸ್ಥಳೀಯರು, ಬಾಣಸವಾಡಿ,

**ಹಾಜರಿದ್ದ ಅಧಿಕಾರಿಗಳು**

1. ಡಾ॥ ರೇಚಲ್ ಎಸ್ ಡ್ಯಾನಿಯಲ್, ಆರೋಗ್ಯ ವೈದ್ಯಾಧಿಕಾರಿಗಳು
2. ಶ್ರೀ ಕೆ.ಶಿವಯ್ಯ, ಕೆಲಸ ಪರಿವೀಕ್ಷಕರು,
3. ಶ್ರೀ ವಿಲಿಯಂ, ಮಾರ್ಷಲ್, ಬಿಬಿಎಂಪಿ

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು, ಮಾಜಿ ಪಾಲಿಕೆ ಸದಸ್ಯರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

| ಕ್ರಸಂ | ಚರ್ಚಿಸಿದ ವಿಷಯಗಳು | ಸಂಬಂಧಪಟ್ಟ ಇಲಾಖೆ |
|---|---|---|
| 1 | ಶ್ರೀ ಕ್ರಿಸ್ಟೋಫರ್ ಕ್ರೂಸ್ ರವರು ಮಾತನಾಡಿ ಹೆಚ್.ಆರ್.ಬಿ.ಆರ್ ಲೇಔಟ್, 9ನೇ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗದಲ್ಲಿ ಬಿದ್ದಿರುವ ಡೆಬ್ರೀಸ್ ಅನ್ನು ತೆರವುಗೊಳಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- BBMP**<br>ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಡೆಬ್ರೀಸ್ ತೆರವುಗೊಳಿಸಲು ಕ್ರಮವಹಿಸಲು ಸೂಚಿಸಲಾಯಿತು. |
| 2 | ಶ್ರೀ ಕ್ರಿಸ್ಟೋಫರ್ ಕ್ರೂಸ್ ರವರು ಮಾತನಾಡಿ ಹೆಚ್.ಆರ್.ಬಿ.ಆರ್ ಲೇಔಟ್, 10ನೇ ಮುಖ್ಯರಸ್ತೆಯಲ್ಲಿ ಪಾದಾಚಾರಿ ಮಾರ್ಗವನ್ನು ಪಟ್ಟಿ ಅಂಗಡಿ ಮಾಲೀಕರು ಒತ್ತುವರಿ ಮಾಡಿಕೊಂಡಿದ್ದು, ಇದರಿಂದ ಸಾರ್ವಜನಿಕ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದಾಗಿ ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- Major Road** |
| 3 | ಶ್ರೀ ಕ್ರಿಸ್ಟೋಫರ್ ಕ್ರೂಸ್ ರವರು ಮಾತನಾಡಿ ಮಧ್ಯ ವಯಸ್ಕರಿಗಾಗಿ ವಾರ್ಡ್ ವ್ಯಾಪ್ತಿಯಲ್ಲಿರುವ ಉದ್ಯಾನವನಗಳಲ್ಲಿ ವಾಲಿಬಾಲ್/ಬಾಸ್ಕೆಟ್ ಬಾಲ್ ಕೋರ್ಟ್ ಮಾಡಬೇಕೆಂದು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE-** ತೋಟಗಾರಿಕೆ ಇಲಾಖೆ |

| | | |
|---|---|---|
| 4 | ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ, ರವರು ಮಾತನಾಡಿ 4ನೇ ಅಡ್ಡರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನಲ್ಲಿ ಡಾಂಬರು ರಸ್ತೆ ಕಾಮಗಾರಿಯನ್ನು ಪ್ರಾರಂಭಿಸಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಕೂಡಲೇ ಪೂರ್ಣಗೊಳಿಸಲು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಅತೀ ತುರ್ತಾಗಿ ಡಾಂಬರು ರಸ್ತೆ ನಿರ್ಮಾಣ ಕಾಮಗಾರಿಯನ್ನು ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಸೂಚಿಸಿ, ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮ ವಹಿಸುವುದಾಗಿ ಸಭೆಗೆ ಸಹಾಯಕ ಅಭಿಯಂತರರು ತಿಳಿಸಿದರು. |
| 5 | ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ, ರವರು ಮಾತನಾಡಿ 2ನೇ ಮುಖ್ಯರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನ ಮನೆಯ ಎದುರುಗಡೆ ಖಾಸಗಿ ಸ್ವತ್ತಿನಲ್ಲಿ ಮರ ಗಿಡಗಳು ಬೆಳೆದಿದ್ದು, ಇದರಿಂದ ಸೊಳ್ಳೆ ಹಾಗೂ ಇತರೆ ಕ್ರಿಮಿ ಕೀಟಗಳು ಹೆಚ್ಚಾಗುತ್ತಿದ್ದು, ಅದನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ)<br>**AEE/JHI- SWM** |
| 6 | ಶ್ರೀಮತಿ ಅಂಜು ಮಿನಾಸ್, ಸ್ಥಳೀಯರು, ಬಾಣಸವಾಡಿ, ರವರು ಮಾತನಾಡಿ 2ನೇ ಡಿ ಅಡ್ಡರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನ 2-3 ಕಡೆಗಳಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದು ಕಂಡು ಬಂದಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ, ಇದನ್ನು ಸರಿಪಡಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE-**ಬೀದಿ ದೀಪಗಳ ವಿಭಾಗ |
| 7 | ಶ್ರೀ ಕರ್ನಲ್ ಘೋರ್ಪಡೆ ರವರು ಮಾತನಾಡಿ, 2ನೇ ಕೆ ಅಡ್ಡರಸ್ತೆ, ಹೆಚ್.ಆರ್.ಬಿ.ಆರ್ ಲೇಔಟ್, 1ನೇ ಬ್ಲಾಕ್ ನಲ್ಲಿ ಹೊಸದಾಗಿ ಈಗಾಗಲೇ ಡಾಂಬರು ರಸ್ತೆಯನ್ನು ನಿರ್ಮಾಣ ಮಾಡಿದ್ದು, ಈ ರಸ್ತೆಗಳಲ್ಲಿ ಕೆಲವು ಕಡೆಗಳಲ್ಲಿ ರಸ್ತೆ ಕಿತ್ತು ಹೋಗಿದ್ದು, ಇದನ್ನು ಕೂಡಲೇ ಸರಿಪಡಿಸಲು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಅತೀ ತುರ್ತಾಗಿ ಕಿತ್ತು ಹೋಗಿರುವ ಡಾಂಬರು ರಸ್ತೆ ನಿರ್ಮಾಣ ಕಾಮಗಾರಿಯನ್ನು ಗುತ್ತಿಗೆದಾರರಿಂದ ಮಾಡಲಾಗುವುದೆಂದು ಸಭೆಗೆ ಸಹಾಯಕ ಅಭಿಯಂತರರು ತಿಳಿಸಿದರು. |
| 8 | ಶ್ರೀ ಕರ್ನಲ್ ಘೋರ್ಪಡೆ, ಸ್ಥಳೀಯರು, ಬಾಣಸವಾಡಿ, ರವರು ಮಾತನಾಡಿ 2ನೇ ಕೆ ಅಡ್ಡರಸ್ತೆ, ಹೆಚ್.ಆರ್.ಬಿ.ಆರ್ ಲೇಔಟ್, 1ನೇ ಬ್ಲಾಕ್‌ನ ಖಾಸಗಿ ಸ್ವತ್ತಿನಲ್ಲಿ ಮರ ಗಿಡಗಳು ಬೆಳೆದಿದ್ದು, ಇದರಿಂದ ಸೊಳ್ಳೆ ಹಾಗೂ ಇತರೆ ಕ್ರಿಮಿ ಕೀಟಗಳು ಹೆಚ್ಚಾಗುತ್ತಿದ್ದು, ಅದನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ)<br>**AEE/JHI- SWM** |
| 9 | ಶ್ರೀ ಕರ್ನಲ್ ಘೋರ್ಪಡೆ ರವರು ಮಾತನಾಡಿ, ಮಾನ್ಯ ಶಾಸಕರು ಕಛೇರಿ ಮುಂಭಾಗದ ರಸ್ತೆಗಳಲ್ಲಿ ಇತ್ತೀಚೆಗೆ ಪಾದಾಚಾರಿ ಮಾರ್ಗವನ್ನು ಬೀದಿ ಬದಿ ವ್ಯಾಪಾರಿಗಳು ಒತ್ತುವರಿ ಮಾಡಿಕೊಂಡು ವಾಣಿಜ್ಯ ಚಟುವಟಿಕೆಗಳನ್ನು ನಡೆಸುತ್ತಿದ್ದರಿಂದ ಪಾದಾಚಾರಿಗಳ ಸುಗಮ ಸಂಚಾರಕ್ಕೆ ಅಡಚಣೆ ಉಂಟಾಗುತ್ತಿರುವುದನ್ನು ತಡೆಗಟ್ಟಲು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸದರಿ ರಸ್ತೆಗಳ ಪಾದಾಚಾರಿ ಮಾರ್ಗದ ತೆರವು ಕಾರ್ಯಾಚರಣೆಯನ್ನು ವಿವಿಧ ಇಲಾಖೆಗಳ ಸಹಯೋಗದೊಂದಿಗೆ ದಿನಾಂಕವನ್ನು ನಿಗಧಿಪಡಿಸಿ, ಪಾದಾಚಾರಿ ಮಾರ್ಗದ ತೆರವುಗೊಳಿಸಲಾಗುವುದೆಂದು ಸಭೆಗೆ ಸಹಾಯಕ ಅಭಿಯಂತರರು ತಿಳಿಸಿದರು. |

| | | |
|---|---|---|
| | ಸ್ಥಳೀಯರು ಮಾತನಾಡಿ, ಹೆಣ್ಣೂರು ಕಾಸ್ಮೊಪಾಲಿಟನ್ ಕ್ಲಬ್ ನವರು ಮಳೆ ನೀರನ್ನು ಸಾರ್ವಜನಿಕ ರಸ್ತೆಗೆ ಬಿಡುತ್ತಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ಸದರಿಯವರು ತಮ್ಮ ಸ್ವತ್ತಿನಲ್ಲಿ ನೀರು ಇಂಗು ಗುಂಡಿಯನ್ನು ನಿರ್ಮಿಸಿ, ಮಳೆಯ ನೀರು ಹೊರಗೆ ಬರದಂತೆ ತಡೆಗಟ್ಟಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಮಾನ್ಯ ಅಧ್ಯಕ್ಷರು ಮಾತನಾಡಿ, ಹೆಣ್ಣೂರು ಕಾಸ್ಮೊಪಾಲಿಟನ್ ಕ್ಲಬ್‌ನ ವ್ಯವಸ್ಥಾಪಕರನ್ನು ಸಂಪರ್ಕಿಸಿ, ಈ ಕ್ರಮ ವಹಿಸಲು ಹಾಗೂ ನೋಟೀಸ್ ಜಾರಿ ಮಾಡಲು ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು. |
| 11 | ಸ್ಥಳೀಯರು ಮಾತನಾಡಿ, ಹೆಣ್ಣೂರು ಕಾಸ್ಮೊಪಾಲಿಟನ್ ಕ್ಲಬ್ ಬರುವ ಸದಸ್ಯರುಗಳು ತಮ್ಮ ವಾಹನಗಳನ್ನು ರಸ್ತೆಯ ಇಕ್ಕೆಲಗಳಲ್ಲಿ ನಿಲುಗಡೆ ಮಾಡುತ್ತಿರುವುದರಿಂದ ವಾಹನ ಸಂಚಾರ ದಟ್ಟಣೆ ಉಂಟಾಗುತ್ತಿದ್ದು, ಇದನ್ನು ತಡೆಗಟ್ಟಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | **Banasawadi Police Station (Traffic Department)** |
| 12 | ಶ್ರೀಮತಿ ಮಣಿ ಮೇಘಾಲ್ಯೆ, ಸ್ಥಳೀಯರು ಮಾತನಾಡಿ, ಜೈ ಜವಾನ್ ನಗರ, 4ನೇ, 5ನೇ, 6ನೇ, 7ನೇ ಮತ್ತು 8ನೇ ಅಡ್ಡರಸ್ತೆಗಳ ಎದುರುಗಡೆಯಲ್ಲಿ ಡೆಬ್ರೀಸ್ ಹಾಗೂ ಕಟ್ಟಡದ ತ್ಯಾಜ್ಯವನ್ನು ಸುರಿದಿದ್ದು, ಇದನ್ನು ತೆರವುಗೊಳಿಸಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು **AEE/AE- Major Road** |
| 13 | ಶ್ರೀಮತಿ ಮಣಿ ಮೇಘಾಲ್ಯೆ, ಸ್ಥಳೀಯರು ಮಾತನಾಡಿ, ವಾರ್ಡ್ ವ್ಯಾಪ್ತಿಯ ಜೈ ಜವಾನ್ ನಗರದಲ್ಲಿ ಬಿಡಬ್ಲ್ಯೂ.ಎಸ್.ಎಸ್.ಬಿ ವತಿಯಿಂದ ಅನಿಯಮಿತ ಸಮಯದಲ್ಲಿ ನೀರು ಸರಬರಾಜು ಮಾಡುತ್ತಿದ್ದು, ಇದರಿಂದ ಸಾರ್ವಜನಿಕರು ನೀರು ಸಂಗ್ರಹಿಸಲು ಕಷ್ಟಕರವಾಗಿದ್ದು, ಬಿಡಬ್ಲ್ಯೂ.ಎಸ್.ಎಸ್.ಬಿ ರವರು ನೀರು ಬಿಡುವ ಸಮಯವನ್ನು ಸಾರ್ವಜನಿಕರ ಗಮನಕ್ಕೆ ತರಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು **AEE/AE- BWSSB** |
| 14 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು ಮಾತನಾಡಿ, 1ನೇ ಅಡ್ಡರಸ್ತೆ, ಓ.ಎಂ.ಬಿ.ಆರ್ ಲೇಔಟ್‌ನಲ್ಲಿ ಓ.ಎಫ್.ಸಿ ಸಂಸ್ಥೆಯ ಕೆಲವು ಕೇಬಲ್ ಹಾಗೂ ಇತರೆ ವಸ್ತುಗಳನ್ನು ಸಂಗ್ರಹಿಸಿದ್ದು, ಸಾರ್ವಜನಿಕರ ಹಿತದೃಷ್ಟಿಯಿಂದ ಅವುಗಳನ್ನು ಕೂಡಲೇ ಸದರಿ ಸ್ಥಳದಿಂದ ತೆರವುಗೊಳಿಸಲು ಸಭೆಗೆ ತಿಳಿಸಿದರು. | ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸಂಬಂಧಪಟ್ಟ ಸಂಸ್ಥೆಯವರ ಕೇಬಲ್ ಹಾಗೂ ಇತರೆ ವಸ್ತುಗಳನ್ನು ಕೂಡಲೇ ತೆರವುಗೊಳಿಸಲು ಕ್ರಮ ವಹಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು. |
| 15 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು ಮಾತನಾಡಿ, ಓ.ಎಂ.ಬಿ.ಆರ್ ಬೂತ್ ಗ್ರೌಂಡ್‌ನಲ್ಲಿ ಒಂದು ಆಟದ ಸಂಕೀರ್ಣವನ್ನು ನಿರ್ಮಾಣ ಮಾಡುತ್ತಿದ್ದು, ಆಟದ ಮೈದಾನದಲ್ಲಿ ಕಟ್ಟಡ ನಿರ್ಮಾಣ ಸಾಮಗ್ರಿಗಳನ್ನು ಎಲ್ಲಂದರಲ್ಲಿ ಹಾಕಿದ್ದು, ಇದರಿಂದ ಮೈದಾನದಲ್ಲಿ ಆಟವಾಡಲು ಕಷ್ಟಕರವಾಗಿದ್ದು, ಇದನ್ನು ಕೂಡಲೇ ಒಂದು ಕಡೆ ಹಾಕಲು ಕ್ರಮ ವಹಿಸಲು ಸಭೆಗೆ ತಿಳಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು **AEE/AE- BDA** |

| | | |
|---|---|---|
| 16 | ಶ್ರೀ ಅಮಿತ್ ನಿಗ್ಲಿ, ಸ್ಥಳೀಯರು ಮಾತನಾಡಿ, 8ನೇ ಮುಖ್ಯರಸ್ತೆಯಿಂದ ಉತ್ತಮ್ ಸಾಗರ್ ಹೋಟಲ್ ವರೆಗೆ ಪಾದಾಚಾರಿ ಮಾರ್ಗದ ಉನ್ನತೀಕರಣ ಕಾಮಗಾರಿಗೆ ರೂ.60.00 ಲಕ್ಷಗಳ ಅನುದಾನ ಬಿಡುಗಡೆಯಾಗಿದ್ದು, ಈ ಕಾಮಗಾರಿಯನ್ನು ಈ ವರೆವಿಗೂ ಪ್ರಾರಂಭಿಸಿರುವುದಿಲ್ಲ, ಈ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದರು. | ಸಹಾಯಕ ಕಾರ್ಯಪಾಲಕ ಅಭಿಯಂತರರು / ಸಹಾಯಕ ಅಭಿಯಂತರರು<br>**AEE/AE- BBMP**<br>ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಈ ಬಗ್ಗೆ ಹಿಂದಿನ ಸಹಾಯಕ ಅಭಿಯಂತರರನ್ನು ವಿಚಾರಿಸಿ, ಮುಂದಿನ ಸಭೆಗೆ ತಿಳಿಸಲಾಗುವುದೆಂದು ಸಭೆಗೆ ತಿಳಿಸಲಾಯಿತು. |

ಕೊನೆಯದಾಗಿ ಮಾನ್ಯ ಅಧ್ಯಕ್ಷರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಮೂರು (03) ವಾರ್ಡ್ ಕಮಿಟಿ ಸಭೆಗಳಿಗೆ ಗೈರು ಹಾಜರಾಗಿರುವ ಬೃಹತ್ ನೀರುಗಾಲುವೆ, ಬೆಸ್ಕಾಂ, ತ್ಯಾಜ್ಯ ನೀರಿನ ನಿರ್ವಹಣೆ, ಸಂಚಾರಿ ಪೊಲೀಸ್, ಬಾಣಸವಾಡಿ ರವರುಗಳು ಕಡ್ಡಾಯವಾಗಿ ಮುಂದಿನ ಸಭೆಗೆ ಹಾಜರಿರಲು ಕ್ರಮ ವಹಿಸಲು ಸೂಚಿಸಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ಎಲ್ಲಾ ವಿಷಯಗಳ ಬಗ್ಗೆ ಆಯಾ ಇಲಾಖೆಯ ಅಧಿಕಾರಿ / ನೌಕರರುಗಳು ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.27, ಬಾಣಸವಾಡಿ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.27, ಬಾಣಸವಾಡಿ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.